# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶಿಕ್ಷಣ ಇಲಾಖೆಗೆ ಒದಗಿಸಲಾಗಿರುವ SCSP ಅನುದಾನದಲ್ಲಿ ಸಮಾಜ ಕಲ್ಯಾಣ ಇಲಾಖೆಯ 68 ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಿಗೆ ಪ್ರತಿ ವರ್ಷ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡುವ ಬಗ್ಗೆ.

**ಓದಲಾಗಿದೆ:**
1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಕನಿ/ಇಡಿ-6/ಸಿಆರ್-4/2023-24, ದಿನಾಂಕ: 29-05-2023.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇವರ ಪತ್ರ ಸಂಖ್ಯೆ:ಎ3/ಕ.ಪ.ಪು.ಸಂ/ ಪ.ಪು.ಬೇಡಿಕೆ/04/ 2021-22, ದಿನಾಂಕ:19-07-2023.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ: SWD/EDU/ED6/108/2023, C-1083728.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ 68 ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಲ್ಲಿ ಶಿಕ್ಷಣ ಇಲಾಖೆಯು ತನ್ನ ಅಧೀನದ ಸರ್ಕಾರಿ ಶಾಲೆಗಳಲ್ಲಿ ಅನುಸರಿಸುವ ಪಠ್ಯ ಕ್ರಮ ಹಾಗೂ ಪಠ್ಯೇತರ ಚಟುವಟಿಕೆಗಳನ್ನೇ ಅಳವಡಿಸಿಕೊಂಡು ನಿರ್ವಹಣೆ ಮಾಡಲಾಗುತ್ತಿದ್ದು, 2024-25ನೇ ಸಾಲಿನಿಂದ ಈ ವಸತಿ ಶಾಲೆಗಳಿಗೆ ಪಠ್ಯ ಪಸ್ತಕಗಳನ್ನು ಶಿಕ್ಷಣ ಇಲಾಖೆಯಿಂದ ಅಧೀನದ ಸರ್ಕಾರಿ ಶಾಲೆಗಳಿಗೆ ಉಚಿತವಾಗಿ ನೀಡಲಾಗುತ್ತಿರುವ ಮಾದರಿಯಲ್ಲಿಯೇ ಸಮಾಜ ಕಲ್ಯಾಣ ಇಲಾಖೆಯ 68 ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಿಗೆ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರ ದಿನಾಂಕ: 29-05-2023ರ ಪ್ರಸ್ತಾವನೆಗೆ ವಿದ್ಯಾ ವಿಕಾಸ ಯೋಜನೆಯಡಿ ಕೇವಲ ಶಿಕ್ಷಣ ಇಲಾಖೆಯ ಶಾಲೆಗಳಿಗೆ ಮಾತ್ರ ಉಚಿತವಾಗಿ ಪಠ್ಯ

ಪುಸ್ತಕಗಳನ್ನು ಪೂರೈಸಲಾಗುತ್ತಿದ್ದು, ಅನುದಾನ ರಹಿತ ಖಾಸಗಿ ಶಾಲೆಗಳು ಹಾಗೂ ಇತರೆ ಶಾಲೆಗಳ ಸಂಬಂಧ ಪಾವತಿ ಆಧಾರದ ಮೇಲೆ ಮಾರಾಟ ವಿಭಾಗದಲ್ಲಿ ಪೂರೈಕೆ ಮಾಡಲಾಗುತ್ತಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ರವರು ತಿಳಿಸಿರುತ್ತಾರೆ. ಅಲ್ಲದೇ ವಿದ್ಯಾ ವಿಕಾಸ ಯೋಜನೆಯಡಿ ಇತರ ಇಲಾಖೆ ಶಾಲೆಗಳಿಗೆ ಉಚಿತ ಪಠ್ಯಪುಸ್ತಕ ವಿತರಿಸಲು ಅನುದಾನ ಬಿಡುಗಡೆಯಾಗಿರುವುದಿಲ್ಲವೆಂದು ಮತ್ತು 2024-25ನೇ ಸಾಲಿಗೆ 68 ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡಲು ಸಮಾಜ ಕಲ್ಯಾಣ ಇಲಾಖೆಯಿಂದ ಸರ್ಕಾರದ ಆದೇಶ ಪಡೆದು ಸಲ್ಲಿಸಿದ್ದಲ್ಲಿ ಉಚಿತವಾಗಿ ಪಠ್ಯಪುಸ್ತಕಗಳನ್ನು ಸರಬರಾಜು ಮಾಡಲು ಕ್ರಮವಹಿಸಲಾಗುವುದೆಂದು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರು 68 ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಿಗೆ ಅಗತ್ಯವಾಗಿರುವ ಪಠ್ಯಪುಸ್ತಕಗಳ ಸಂಬಂಧ ಪ್ರತಿ ಶಾಲೆಯಿಂದ ಆಯಾಯ ಶೈಕ್ಷಣಿಕ ವರ್ಷದಲ್ಲಿ ಖಜಾನೆ ಮೂಲಕ ಪಾವತಿ ಮಾಡಿ ತದನಂತರದಲ್ಲಿ ಪಠ್ಯ ಪುಸ್ತಕಗಳನ್ನು ಸರಬರಾಜು ಪಡೆಯಲಾಗುತ್ತಿರುವುದಾಗಿ ಹಾಗೂ ಸದರಿ ಪದ್ಧತಿಯಲ್ಲಿ ಅನೇಕ ಲೋಪದೋಷಗಳು ಕಂಡುಬಂದಿರುವುದಾಗಿ ತಿಳಿಸಿರುತ್ತಾರೆ. ಉದಾಹರಣೆಗೆ Recipient id ತಪ್ಪಾಗಿರುವುದು, KTBS ರವರ ಹಳೇ ಬ್ಯಾಂಕ್ ಖಾತೆಗೆ ಜಮಾ ಮಾಡುತ್ತಿರುವುದು ಇತ್ಯಾದಿಗಳಿಂದಾಗಿ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳೆರಡಕ್ಕೂ ತೊಂದರೆ ಉಂಟಾಗಿರುತ್ತದೆ. ಆದ್ದರಿಂದ, ವಾರ್ಷಿಕವಾಗಿ ಪ್ರತಿ ಶಾಲೆಗೆ ಅಂದಾಜು ರೂ.29,000/- ಗಳಾಗಲಿದ್ದು, ಒಟ್ಟು 68 ಶಾಲೆಗಳಿಗೆ ಪ್ರತಿ ವರ್ಷಕ್ಕೆ ಅಂದಾಜು ರೂ.19.92 ಲಕ್ಷಗಳು ವೆಚ್ಚವಾಗಲಿದ್ದು, ಸದರಿ 68 ಶಾಲೆಗಳಲ್ಲಿ ಶೇ 75 ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದರಿಂದ, ಶಿಕ್ಷಣ ಇಲಾಖೆಗೆ ಒದಗಿಸಿರುವ SCSP ಅನುದಾನದಲ್ಲಿ ಸದರಿ ವೆಚ್ಚವನ್ನು ಭರಿಸಿ ಪ್ರತಿ ವರ್ಷ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಸದರಿ ಶಾಲೆಗಳಿಗೆ ಶಿಕ್ಷಣ ಇಲಾಖೆಯಿಂದ ಸರಬರಾಜು ಮಾಡಲು ಆದೇಶ ಹೊರಡಿಸುವಂತೆ ಕೋರಿ ಏಕಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: SWD/EDU/ED6/108/2023, C-1083728**
**ದಿನಾಂಕ:04-10-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಂತೆ, ಸಮಾಜ ಕಲ್ಯಾಣ ಇಲಾಖೆಯ ಅಧೀನದ 68 ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳಿಗೆ ತಗಲುವ ವೆಚ್ಚವನ್ನು ವ್ಯವಸ್ಥಾಪಕ

ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇವರಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಒದಗಿಸಲಾಗಿರುವ ಎಸ್.ಸಿ.ಎಸ್.ಪಿ ಅನುದಾನದಲ್ಲಿ 2024-25ನೇ ಸಾಲಿನಿಂದ ಪ್ರತಿ ವರ್ಷ ಭರಿಸಿ, ಒಟ್ಟು 68 ಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡಲು ಆದೇಶಿಸಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ:07 ಟಿಎಫ್‌ಪಿ 2023, ದಿನಾಂಕ 31-07-2023ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/10/23

**(ಎಲ್. ನರಸಿಂಹಮೂರ್ತಿ )**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು (ಲೆಕ್ಕ ಪತ್ರ: ಲೆಕ್ಕಪರಿಶೋಧನೆ) ಪಾರ್ಕ್ ರಸ್ತೆ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬಹುಮಹಡಿಗಳ ಕಟ್ಟಡ , ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು.
7. ಎಲ್ಲಾ ಜಿಲ್ಲೆಯ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು(ಜಿಲ್ಲಾ ಪಂಚಾಯತ್), (ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ).
8. ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ (ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)

9. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂ. ಇವರ ಮುಖಾಂತರ)
10. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :**

1) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.